## ಶಿಕ್ಷಣ ಹಕ್ಕು ಕಾಯಿದೆ ಅಡಿ 2016-17ನೇ ಸಾಲಿಗೆ ಮಕ್ಕಳ ದಾಖಲಾತಿಗೆ ನಿಗದಿಪಡಿಸಿರುವ ವೇಳಾಪಟ್ಟಿ

| ಕ್ರ.ಸಂ. | ಪ್ರಕ್ರಿಯೆ | ದಿನಾಂಕ | ಕ್ರಮ |
|---|---|---|---|
| 1 | ನೆರೆಹೊರೆಯ ಶಾಲೆಗಳ ಪಟ್ಟಿ ಸಿದ್ದಪಡಿಸಲು ಆನ್‌ಲೈನ್‌ತಂತ್ರಾಂಶವನ್ನು ವೆಬ್‌ಸೈಟ್‌ನಲ್ಲಿ ಬಿಡುಗಡೆ ಮಾಡುವುದು. | 29.01.2016 | ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ |
| 2 | ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವ ನೆರೆಹೊರೆಯ ಶಾಲೆಗಳ ಮಾಹಿತಿಯನ್ನು U-DISE ಅಂಕಿ ಅಂಶಗಳ ನೈಜತೆಖಾತರಿ ಪಡಿಸಿಕೊಂಡು ಆನ್‌ಲೈನ್‌ನಲ್ಲಿ ಅಪ್‌ಡೇಟ್ ಮಾಡಲು ಕೊನೆಯ ದಿನಾಂಕ. | 11.02.2016 | ಸಂಬಂಧಿಸಿದ ಉಪನಿರ್ದೇಶಕರು, ಕ್ಷೇತ್ರಶಿಕ್ಷಣಾಧಿಕಾರಿಗಳು |
| 3 | ನೆರೆಹೊರೆ ಶಾಲೆಗಳ ತಾತ್ಕಾಲಿಕ ಪಟ್ಟಿ ಪ್ರಕಟಣೆ | 15.02.2016 | ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳು ಹಾಗೂ ಉಪನಿರ್ದೇಶಕರು (ಆಡಳಿತ) |
| 4 | ನೆರೆಹೊರೆ ಶಾಲೆಗಳ ತಾತ್ಕಾಲಿಕ ಪಟ್ಟಿಗೆ ಆಕ್ಷೇಪಣೆಗಳನ್ನು ಸ್ವೀಕಾರ ಮತ್ತು ವಿಲೇವಾರಿ ಮಾಡಿ ನೈಜಪಟ್ಟಿಯನ್ನು ಆನ್‌ಲೈನ್‌ನಲ್ಲಿ ಅಪ್‌ಡೇಟ್ ಮಾಡಲು ಉಪನಿರ್ದೇಶಕರಿಗೆ ಸಲ್ಲಿಸಲು ಕೊನೆಯ ದಿನಾಂಕ | 15.02.2016 ರಿಂದ 18.02.2016 | ಪೋಷಕರು ಹಾಗೂ ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳು ಮತ್ತು ಉಪನಿರ್ದೇಶಕರು (ಆಡಳಿತ) |
| 5 | ನೆರೆಹೊರೆ ಶಾಲೆಗಳ ಅಂತಿಮ ಪಟ್ಟಿಯನ್ನು ಜಿಲ್ಲೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು ಪ್ರತಿ ಅನುದಾನರಹಿತ ಶಾಲೆಯಲ್ಲಿ ಲಭ್ಯವಿರುವ ಶೇ.25 ಸೀಟುಗಳನ್ನು ಪ್ರಕಟಿಸುವುದು (ನಮೂನೆ 5 ರಲ್ಲಿ) | 22.02.2016 | ಸಂಬಂಧಿಸಿದ ಉಪನಿರ್ದೇಶಕರು (ಆಡಳಿತ) ಮತ್ತು ಕ್ಷೇತ್ರಶಿಕ್ಷಣಾಧಿಕಾರಿಗಳು |
| 6 | ಶಾಲಾ ದಾಖಲಾತಿ ಕೋರಿ ಪೋಷಕರು ಆನ್‌ಲೈನ್ ಅಥವಾ ಆಫ್‌ಲೈನ್ ಮೂಲಕ ಅಗತ್ಯ ದಾಖಲಾತಿಗಳ ಸಮೇತ ಗರಿಷ್ಠ ಐದು ಶಾಲೆಗಳಿಗೆ ಆದ್ಯತೆ ಗುರುತಿಸಿ ಒಂದೇ ಒಂದು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಅವಧಿ. | 23.02.2016 ರಿಂದ 15.03.2016 | ಪೋಷಕರು, ಶಾಲಾ ಮುಖ್ಯಸ್ಥರು ಹಾಗೂ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು |
| 7. | ಆನ್‌ಲೈನ್‌ನಲ್ಲಿ ಸ್ವೀಕರಿಸಿದ ಅರ್ಜಿಗಳ ಪೋಷಕರ ವಾಸಸ್ಥಳ ದೃಢೀಕರಣವನ್ನು ಸಂಬಂಧಿಸಿದ ಇಲಾಖೆಗಳ ಸಹಯೋಗದೊಂದಿಗೆ ಬ್ಯಾಚ್‌ಮೋಡ್‌ನಲ್ಲಿ ತಂತ್ರಾಂಶದ ಮೂಲಕ ಪರಿಶೀಲಿಸಿ ನೈಜತೆ ದೃಢೀಕರಿಸಿಕೊಳ್ಳುವುದು. | 25.02.2016 ರಿಂದ 22.03.2016 | ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ |
| 8 | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾದ 15-03-2016ರಂದು ಸ್ವೀಕರಿಸಿದ ಅರ್ಜಿಗಳ ನೈಜತೆಯನ್ನು ಕೇಂದ್ರ ಕಛೇರಿಯಲ್ಲಿ ಸಂಬಂಧಿಸಿದ ಇಲಾಖೆಗಳ ಸಹಯೋಗದೊಂದಿಗೆ ಬ್ಯಾಚ್‌ಮೋಡ್‌ನಲ್ಲಿ ಪರಿಶೀಲಿಸಿ ಅಪೂರ್ಣ ಅಥವಾ ಕ್ರಮಬದ್ಧವಲ್ಲದ ಅರ್ಜಿಗಳ ತಂದೆ/ತಾಯಿ/ಪೋಷಕರ ಮೊಬೈಲ್‌ಗೆ ಎಸ್‌ಎಂಎಸ್ ಕಳುಹಿಸಲು ಕೊನೆಯ ದಿನಾಂಕ | 18-03-2016 | ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ |
| 9 | ಎಸ್‌ಎಂಎಸ್ ಮೂಲಕ ಸ್ವೀಕರಿಸಿದ ಆಕ್ಷೇಪಣೆಗಳಿಗೆ ಸಂಬಂಧಿಸಿದಂತೆ ಪೋಷಕರಿಂದ ಆಕ್ಷೇಪಣೆಗಳ ಸ್ವೀಕಾರ, ವಿಲೇವಾರಿ ಹಾಗೂ ಆಕ್ಷೇಪಣೆಗಳನ್ನು ತಿರಸ್ಕರಿಸಿದಲ್ಲಿ ಅರ್ಜಿದಾರರಿಗೆ ಹಿಂಬರಹ ನೀಡುವುದು ಮತ್ತು ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡುವುದು. ಸಾರ್ವಜನಿಕರು ಸಲ್ಲಿಸಿದ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಿ ಆಕ್ಷೇಪಣೆ ನೈಜತೆಯಿಂದ ಕೂಡಿದ್ದಲ್ಲಿ, ಸದರಿ ಮಾಹಿತಿಯನ್ನು ತಂತ್ರಾಂಶದಲ್ಲಿ | 19-03-2016 ರಿಂದ 21-03-2016 | ಪೋಷಕರು ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳು |

| | | | |
|---|---|---|---|
| | ಅಪ್‌ಲೋಡ್ ಮಾಡಲು ಕೊನೆಯ ದಿನಾಂಕ (ತಂತ್ರಾಂಶದಲ್ಲಿ ಗುರುತಿಸಲಾಗದ ನ್ಯೂನ್ಯತೆಗಳನ್ನು ಕ್ಷೇತ್ರಶಿಕ್ಷಣಾಧಿಕಾರಿಗಳು ದಾಖಲೆ ಪರಿಶೀಲಿಸಿ, ಸರಿಪಡಿಸಿ ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡುವುದು) | | |
| **10** | ಲಾಟರಿ ಪ್ರಕ್ರಿಯೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿ ಪ್ರಕಟಣೆ | 22-03-2016 | ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ. |
| **11** | ಲಾಟರಿ ಪ್ರಕ್ರಿಯೆಗೆ ಅರ್ಹ ಅಭ್ಯರ್ಥಿಗಳ ಹೆಸರು ಸೇರ್ಪಡೆಯಾಗಿರುವುದನ್ನು ತಂತ್ರಾಂಶದ ಮೂಲಕ ಖಾತರಿ ಪಡಿಸಿಕೊಳ್ಳಲು ಪೋಷಕರಿಗೆ ನಿಗದಿಪಡಿಸಿರುವ ಅವಧಿ | 23.03.2016 ರಿಂದ 26.03.2016 | ಪೋಷಕರು |
| **12** | ದಾಖಲಾತಿಗಳು ಸರಿಯಾಗಿದ್ದು, ಅರ್ಹ ಅಭ್ಯರ್ಥಿಗಳ ಪಟ್ಟಿಯಲ್ಲಿ ಹೆಸರು ಸೇರ್ಪಡೆಯಾಗಿರದಿದ್ದಲ್ಲಿ ಪೋಷಕರಿಂದ ಆಕ್ಷೇಪಣೆ ಬಂದಲ್ಲಿ ಪರಿಶೀಲಿಸಿ, ನಿಯಮಾನುಸಾರ ಮಾಹಿತಿಯನ್ನು ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡುವ ಅವಧಿ. | 23.03.2016 ರಿಂದ 28.03.2016 | ಪೋಷಕರು ಮತ್ತು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು |
| 13 | ಆನ್‌ಲೈನ್ ತಂತ್ರಾಂಶದ ಮೂಲಕ ಮೊದಲ ಸುತ್ತಿನ ಸೀಟು ಹಂಚಿಕೆ. | 06.04.2016 | ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ |
| 14 | ಶಾಲೆಗಳಲ್ಲಿ ದಾಖಲಾತಿ ಪ್ರಕ್ರಿಯೆ ಪ್ರಾರಂಭ | 07.04.2016 ರಿಂದ 21.04.2016 | ಸಂಬಂಧಿಸಿದ ಶಾಲಾ ಮುಖ್ಯಸ್ಥರು/ ಪೋಷಕರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು |
| 15 | ಶಾಲೆಗಳಲ್ಲಿ ದಾಖಲಾದ ಮಕ್ಕಳ ಮಾಹಿತಿಯನ್ನು ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡುವ ಅವಧಿ | 11.04.2016 ರಿಂದ 25.04.2016 | ಸಂಬಂಧಿಸಿದ ಶಾಲಾ ಮುಖ್ಯಸ್ಥರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು |

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ